**ಕರ್ನಾಟಕ ವಿಧಾನ ಪರಿಷತ್ತು**

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 342 |
| 2 | ಸದಸ್ಯರ ಹೆಸರು | : | ಶ್ರೀ ಸುನೀಲ್ ಗೌಡ ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| 3 | ಉತ್ತರಿಸುವ ದಿನಾಂಕ | : | 18-07-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರಿನ ಐತಿಹಾಸಿಕ ಹೆಬ್ಬಾಳ ಕೆರೆಯ ಅಭಿವೃದ್ಧಿ ಕಾರ್ಯವು ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕೆರೆಯನ್ನು ಅಭಿವೃದ್ಧಿಪಡಿಸಲು ಸರ್ಕಾರ ಕೈಗೊಂಡ ಕ್ರಮಗಳೇನು? | ಬಂದಿದೆ.<br>ಹೆಬ್ಬಾಳ ಕೆರೆಯನ್ನು ಅಭಿವೃದ್ಧಿಪಡಿಸಲು ರೂ.2000.00 ಲಕ್ಷಗಳಿಗೆ ಕೇಂದ್ರ ಸರ್ಕಾರದ Urban Flood Risk Management Programme (UFRMP) ಯೋಜನೆಯಡಿಯಲ್ಲಿ ಯೋಜನಾ ವರದಿಯನ್ನು ತಯಾರಿಸಲಾಗಿರುತ್ತದೆ. 2024-25ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ಸದರಿ ಕೆರೆಯ ವಾರ್ಷಿಕ ನಿರ್ವಹಣೆಗೆ ರೂ.48.00 ಲಕ್ಷಗಳನ್ನು ಮೀಸಲಾಗಿಡಲಾಗಿದೆ. |
| ಆ) | ಸದರಿ ಕೆರೆಯ ಅಭಿವೃದ್ಧಿಗೆ ಅನುದಾನದ ಕೊರತೆ ಇದೆಯೇ; ಇಲ್ಲದಿದ್ದಲ್ಲಿ, ಕೆರೆಯ ಅಭಿವೃದ್ಧಿ ಕಾರ್ಯಕ್ಕೆ ಇರುವ ತೊಂದರೆಗಳೇನು; (ವಿವರ ನೀಡುವುದು) | ಇಲ್ಲ |
| ಇ) | ಈ ಕೆರೆಯ ಬಹಳಷ್ಟು ಭಾಗವನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಅತಿಕ್ರಮಣ ತೆರವುಗೊಳಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; | ಸರ್ಕಾರದ ಆದೇಶ ಸಂಖ್ಯೆ: ನಅಇ 250 ಎಂಎನ್‌ವೈ 2018 (ಭಾಗ-3), ದಿನಾಂಕ: 28-08-2023 ರನ್ವಯ ಕ್ರಮ ಜರುಗಿಸಲಾಗುತ್ತಿದೆ. |
| ಈ) | ಕಸ ಹಾಗೂ ಮತ್ತಿತರ ತ್ಯಾಜ್ಯವನ್ನು ಸದರಿ ಕೆರೆಗೆ ಹಾಕುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿರುವುದಿಲ್ಲ. ಆದಾಗ್ಯೂ ಮಾರ್ಷಲ್‌ಗಳನ್ನು ಇದರ ಮೇಲ್ವಿಚಾರಣೆಗೆ ನಿಯೋಜಿಸಲಾಗಿದೆ. |

| | | |
|---|---|---|
| ಉ) | ಸದರಿ ಕೆರೆಯ ಅಭಿವೃದ್ಧಿಗೆ ಸರ್ಕಾರ ಯಾವ ಯೋಜನೆ ಹಮ್ಮಿಕೊಂಡಿದೆ ಮತ್ತು ಕೆರೆಯ ಅಭಿವೃದ್ಧಿಗೆ ಸರ್ಕಾರ ಎಷ್ಟು ಹಣವನ್ನು ಮೀಸಲಿರಿಸಿದೆ; (ವಿವರ ನೀಡುವುದು) | • ಹೆಬ್ಬಾಳ ಕೆರೆಯನ್ನು ಅಭಿವೃದ್ಧಿಪಡಿಸಲು ರೂ.2000.00 ಲಕ್ಷಗಳಿಗೆ ಕೇಂದ್ರ ಸರ್ಕಾರದ Urban Flood Risk Management Programme (UFRMP) ಯೋಜನೆಯಡಿಯಲ್ಲಿ ಅನುದಾನ ಕೋರಿ ಯೋಜನಾ ವರದಿಯನ್ನು ತಯಾರಿಸಲಾಗಿರುತ್ತದೆ.<br>• 2024–25ನೇ ಸಾಲಿನ ಪಾಲಿಕೆ ಆಯವ್ಯಯದಲ್ಲಿ ಸದರಿ ಕೆರೆಯ ವಾರ್ಷಿಕ ನಿರ್ವಹಣೆಗೆ ರೂ.48.00 ಲಕ್ಷಗಳನ್ನು ಮೀಸಲಾಗಿಡಲಾಗಿದೆ. |
| ಊ) | ಪ್ರಸ್ತುತ ಸದರಿ ಕೆರೆಯ ನಿರ್ವಹಣೆಯನ್ನು ಯಾರು ಮಾಡುತ್ತಿದ್ದಾರೆ? (ವಿವರ ನೀಡುವುದು) | ಹೆಬ್ಬಾಳ ಕೆರೆಯನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 39 ಬೆಂಆಸೇ 2019, ದಿನಾಂಕ: 20–10–2023 ರ ಪ್ರಕಾರ ಕರ್ನಾಟಕ ಅರಣ್ಯ ಇಲಾಖೆಯಿಂದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಹಸ್ತಾಂತರಿಸಿಕೊಂಡು ನಿರ್ವಹಿಸಲಾಗುತ್ತಿದೆ. |

**ನಅಇ 336 ಎಂಎಸ್‌ವೈ 2024**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ